# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162, ಗಿರಿನಗರ, ಬೆಂಗಳೂರು.

## ಆಗಸ್ಟ್ 2022 : ವಾರ್ಡ್ ಸಮಿತಿಯ 1ನೇ ಸಭೆಯ ನಡವಳಿಗಳು

***********

ಉಲ್ಲೇಖ : ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 22-09-2021.

******

ದಿನಾಂಕ : 06-08-2022
ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕಾನಂದ ಉದ್ಯಾನವನ, ಗಿರಿನಗರ
ಸಮಯ : ಪೂರ್ವಾಹ್ನ 11.00 ಗಂಟೆಗೆ

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಸುನಿಲ್‌ಕುಮಾರ್.ಪಿ | ಮಾನ್ಯ ಮುಖ್ಯ ನಗರ ಯೋಜಕರು ಹಾಗೂ ನೋಡಲ್ ಅಧಿಕಾರಿಗಳು. |
| 2 | ಶ್ರೀ ರಮೇಶ್.ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ. |
| 3 | ಶ್ರೀ ಸತ್ಯಜ್ಯೋತಿ.ಎ.ಡಿ. | ಎಸ್.ಡಬ್ಲ್ಯೂ.ಎಮ್.ಸೂಪರ್‌ವೈಸರ್. |
| 4 | ಶ್ರೀ ಸಂತೋಷ್ | ಎಸ್.ಡಬ್ಲ್ಯೂ.ಎಮ್.ಬಿಬಿಎಂಪಿ. |
| 5 | ಶ್ರೀ ಧವಳೇಶ್.ಬಿ | ಸಹಾಯಕ ಅಭಿಯಂತರರು. ಬೆಸ್ಕಾಂ. |
| 6 | ಶ್ರೀ ಕುಮಾರ್ | ಬಿ,ಡಬ್ಲ್ಯೂ.ಎಸ್.ಎಸ್.ಬಿ ಗಿರಿನಗರ. |

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಹಾಜರಿದ್ದ ಸದಸ್ಯರೆಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಗಿರಿನಗರ ಪೊಲೀಸ್ ಸಿಬ್ಬಂದಿಯವರಿಗೆ ಸಭೆಯಲ್ಲಿ ಹಲವಾರು ಬಾರಿ ತಿಳಿಸಿದ್ದರೂ ಸಹ ಸಿ.ಸಿ.ಕ್ಯಾಮರಗಳ ಮಾಹಿತಿಯನ್ನು ಸಲ್ಲಿಸಿದೇ ಇರುವುದು ಹಾಗೂ ಗೈರು ಹಾಜರಾಗುತ್ತಿರುವ ಬಗ್ಗೆ ಮಾನ್ಯ ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದರು ಮತ್ತು ಸಂಬಂಧಪಟ್ಟ ಇಲಾಖೆಯ ಮುಖ್ಯಸ್ಥರಿಗೆ ಈ ಬಗ್ಗೆ ಪತ್ರ ಬರೆಯುವಂತೆ ಸಭೆಯಲ್ಲಿ ಹಾಜರಿದ್ದ ಕಾರ್ಯದರ್ಶಿಯವರಿಗೆ ಸೂಚಿಸಿದರು.

2. ಹಿಂದಿನ ವಾರ್ಡ್ ಸಭೆಯಲ್ಲಿ ಬೆಸ್ಕಾಂಗೆ ಸಂಬಂಧಿಸಿದ ಕಂಪ್ಲೆಂಟ್ ತಿಳಿಸಿದ್ದರೂ ಸಹ ಅದರ ಬಗ್ಗೆ ಗಮನಹರಿಸದೇ ಇರುವ ಬಗ್ಗೆ ಮಾನ್ಯ ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದರು ಮತ್ತು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ನೋಟೀಸ್ ಜಾರಿ ಮಾಡಬೇಕೆಂದು ಸಭೆಯಲ್ಲಿ ಹಾಜರಿದ್ದ ಕಾರ್ಯದರ್ಶಿಯವರಿಗೆ ಸೂಚಿಸಿದರು.

3. ವಾರ್ಡ್‌ನಲ್ಲಿ ಪ್ರತಿ ತಿಂಗಳು ನಡೆಯುವ ವಾರ್ಡ್ ಸಮಿತಿ ಸಭೆಗೆ ಬೀದಿ ದೀಪಗಳ ಸಹಾಯಕ ಅಭಿಯಂತರರು ಅಥವಾ ಇಲಾಖೆ ಕಡೆಯಿಂದ ಯಾರೊಬ್ಬರೂ ಬಾರದೇ ಇರುವುದಕ್ಕೆ ಮಾನ್ಯ ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದರು ಮತ್ತು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ನೋಟೀಸ್ ಜಾರಿ ಮಾಡಬೇಕೆಂದು ಸಭೆಯಲ್ಲಿ ಹಾಜರಿದ್ದ ಕಾರ್ಯದರ್ಶಿಯವರಿಗೆ ಸೂಚಿಸಿದರು.

4. ಗಿರಿನಗರ ವಾರ್ಡ್ ವ್ಯಾಪ್ತಿಯ ಹೊಸಕೆರೆಹಳ್ಳಿ ಕ್ರಾಸ್ ಹತ್ತಿರ ವಿದ್ಯುತ್ ಪೋಲ್‌ನಲ್ಲಿನ ಲಿವರ್ ಅಡಚಣೆಯಾಗಿದ್ದು ಅದನ್ನು ತಕ್ಷಣವೇ ಸರಿ ಪಡಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂನ ಸಹಾಯಕ ಅಭಿಯಂತರರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

5. ವಾರ್ಡ್‌ನ 2ನೇ ಮುಖ್ಯರಸ್ತೆ, 12ನೇ ಅಡ್ಡ ರಸ್ತೆ, ಎಸ್.ಬಿ.ಎಂ ಕಾಲೋನಿಯಲ್ಲಿ ಗಾರ್ಬೇಜ್‌ನ್ನು ಸೂಕ್ತ ರೀತಿಯಲ್ಲಿ ತೆಗೆದುಕೊಂಡು ಹೋಗಬೇಕೆಂದು ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

6. ಗಿರಿನಗರ ವಾರ್ಡ್ ನೆಹರೂ ರಸ್ತೆಯಲ್ಲಿ ಇರುವ ಗಾರ್ಬೇಜ್ ಪಾಯಿಂಟ್ ಎದುರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಕಛೇರಿ ಹತ್ತಿರ ಕಸವನ್ನು ಪ್ರತಿ ನಿತ್ಯ ತೆಗೆದುಕೊಂಡು ಹೋಗಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

"ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು".

06/08/2022
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 162, ಗಿರಿನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ವಲಯ ಆಯುಕ್ತರು ( ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು. ಬಸವನಗುಡಿ ರವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.